# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:** | **102 (1110)** |
| ಸದಸ್ಯರ ಹೆಸರು: | ಶ್ರೀಮತಿ ಹೇಮಲತಾ ನಾಯಕ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | 16.12.2025 |
| ಉತ್ತರಿಸುವವರು: | ಪೌರಾಡಳಿತ ಮತ್ತು ಹಜ್ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಸೇವಾ ನೌಕರರನ್ನು ರಾಜ್ಯ ಸರ್ಕಾರಿ ನೌಕರರೆಂದು ಪರಿಗಣಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ; (ಮಾಹಿತಿ ಒದಗಿಸುವುದು) | ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಸೇವಾ ನೌಕರರನ್ನು ರಾಜ್ಯ ಸರ್ಕಾರಿ ನೌಕರರೆಂದು ಪರಿಗಣಿಸುವ ಕುರಿತು ಪೌರ ನೌಕರರ ಸಂಘಗಳ ವತಿಯಿಂದ ಮನವಿಗಳು ಸ್ವೀಕೃತವಾಗಿದ್ದು, ಪರಿಶೀಲನಾ ಹಂತದಲ್ಲಿರುತ್ತದೆ. |
| ಆ) | ಸದರಿ ಪೌರ ಸೇವಾ ನೌಕರರಿಗೆ ಕೆ.ಜಿ.ಐ.ಡಿ, ಜ್ಯೋತಿ ಸಂಜೀವಿನಿ ಸೇರಿದಂತೆ ಇತರೆ ಸೌಲಭ್ಯಗಳನ್ನು ಒದಗಿಸಲಾಗಿದೆಯೇ; (ಮಾಹಿತಿ ಒದಗಿಸುವುದು) | ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಸೇವಾ ನೌಕರರಿಗೆ ಕೆ.ಜಿ.ಐ.ಡಿ ಹಾಗೂ ಜ್ಯೋತಿ ಸಂಜೀವಿನಿ ಸೌಲಭ್ಯಗಳನ್ನು ಒದಗಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಸದರಿ ಮಾಹಿತಿಯನ್ನು ಈಗಾಗಲೇ ತಿಳಿಸಲಾಗಿರುತ್ತದೆ (ವಿವರವನ್ನು **ಅನುಬಂಧದಲ್ಲಿ** ನೀಡಲಾಗಿದೆ). |
| ಇ) | ನಗರ ಸ್ಥಳೀಯ ಸಂಸ್ಥೆಗಳಲ್ಲಿ ಲ್ಯಾಬ್ ಟೆಕ್ನಿಷಿಯನ್, ಅಕೌಂಟೆಂಟ್, ಜೂನಿಯರ್ / ಸೀನಿಯರ್ ಪ್ರೋಗ್ರಾಮರ್, ವಾಹನ ಚಾಲಕರು, ಪ್ಲಂಬರ್ ಹಾಗೂ ಇತ್ಯಾದಿ ಹುದ್ದೆಗಳು ತೀರಾ ಅವಶ್ಯಕತೆ ಇದ್ದು, ಸದರಿ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವರುಗಳನ್ನು ವೃಂದ | ಬಂದಿದೆ.<br>ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ನೇರ ನೇಮಕಾತಿಯಡಿ ಖಾಲಿ ಇರುವ ಹುದ್ದೆಗಳನ್ನು ಆರ್ಥಿಕ ಇಲಾಖೆಯ ಅನುಮೋದನೆ ಪಡೆದ ನಂತರ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.<br>ಮುಂದುವರೆದು, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅಕೌಂಟೆಂಡ್, ಜೂನಿಯರ್/ಸೀನಿಯರ್ |

Scanned with OKEN Scanne

| | | |
|---|---|---|
| | ಮತ್ತು ನೇಮಕಾತಿ ಅಡಿಯಲ್ಲಿ ನೇಮಕಾತಿ ಪ್ರಕ್ರಿಯೆ ಯಾವಾಗ ಕೈಗೊಳ್ಳಲಾಗುವುದು; (ಮಾಹಿತಿ ಒದಗಿಸುವದು) | ಪ್ರೋಗ್ರಾಮರ್ ವಾಹನ ಚಾಲಕರು, ಪ್ಲಂಬರ್ ಹಾ ಇತ್ಯಾದಿ ಹುದ್ದೆಗಳನ್ನು ಅವಶ್ಯಕತೆಗನುಗುಣವಾಗಿ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಜಿಲ್ಲಾ ಮಟ್ಟದಲ್ಲಿ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. ಅದರಂತೆ ಜಿಲ್ಲಾ ಮಟ್ಟದಲ್ಲಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇಮಕಾತಿ ಮಾಡಿಕೊಳ್ಳಲು ಕ್ರಮವಹಿಸಲಾಗುತ್ತಿದೆ. |
| ಈ) | ಸದರಿ ಹುದ್ದೆಗಳು ಖಾಲಿ ಇರುವುದರಿಂದ ನಗರ ಸ್ಥಳೀಯ ಸಂಸ್ಥೆಗಳ ಘನ ತ್ಯಾಜ್ಯ ವಿಲೇವಾರಿ ನಿರ್ವಹಣೆ, ಮಾಲಿನ್ಯ ನೀರು ನಿರ್ವಹಣೆ, ಲೆಕ್ಕಪತ್ರಗಳ ನಿರ್ವಹಣೆ, ನೀರಿನ ಗುಣಮಟ್ಟ ನಿರ್ವಹಣೆ ಹಾಗೂ ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದಂತೆ ಅನೇಕ ತೊಡಕುಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ತೊಡಕುಗಳನ್ನು ನಿವಾರಿಸಲು ಸರ್ಕಾರ ಯಾವ ರೀತಿಯ ಶಾಶ್ವತ ಪರಿಹಾರವನ್ನು ತೆಗೆದುಕೊಳ್ಳುವುದು; (ವಿವರ ಒದಗಿಸುವುದು) | ಬಂದಿದೆ<br><br>ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿಯನ್ನು ರಚಿಸಿ, (DLCC) ಅವಶ್ಯವಿರುವ ಸಿಬ್ಬಂದಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲು ಅವಕಾಶ ಕಲ್ಪಿಸಿ, ತೊಡಕುಗಳನ್ನು ನಿವಾರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಲೆಕ್ಕಪತ್ರ ನಿರ್ವಹಣೆ, ನೀರಿನ ಗುಣಮಟ್ಟ ನಿರ್ವಹಣೆ, ಹಾಗೂ ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದಂತೆ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಜಿಲ್ಲಾ ಮಟ್ಟದಲ್ಲಿ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. |

ಸಂಖ್ಯೆ: ನಅಇ 312 ಜಿಇಎಲ್ 2025 (ಇ)

(ರಹೀಂಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು

Scanned with OKEN Scanne

ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 154 ಎಂಎನ್ಇ 2020(ಇ)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ: 16.02.2021

ಇವರಿಂದ,
ಸರ್ಕಾರದ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,
ವಿಕಾದ ಸೌಧ, ಬೆಂಗಳೂರು.

ಇವರಿಗೆ,
ನಿರ್ದೇಶಕರು,
ಪೌರಾಡಳಿತ ನಿರ್ದೇಶನಾಲಯ,
ವಿ.ವಿ ಗೋಪುರ, ಬೆಂಗಳೂರು

2300677
Directorate of Municipal Admin
No
Compilation
16 FEB 2021
HQA / AD. Admin
DMA

ಮಾನ್ಯರೆ,

**ವಿಷಯ**: ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಾಗೂ ಎಲ್ಲಾ ಮಹಾನಗರಪಾಲಿಕೆಗಲ್ಲಿನ ನೌಕರರಿಗೆ .ಕೆಜಿ.ಐ.ಡಿ ಮತ್ತು ಜಿ.ಪಿ.ಎಫ್ ಸೌಲಭ್ಯ ನೀಡುವ ಬಗ್ಗೆ.

**ಉಲ್ಲೇಖ:** ತಮ್ಮ ಪತ್ರ ಸಂಖ್ಯೆ: 13919/ಡಿಎಂಎ/9/ಜಿಎಂಐಎಸ್ ಸಿ/2015-16,ದಿನಾಂಕ : 17.11.2020

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ರಾಜ್ಯದ ಪೌರಸೇವಾ ಹಾಗೂ ಮಹಾನಗರಪಾಲಿಕೆ ಸಿಬ್ಬಂದಿಗಳಿಗೆ ಸರ್ಕಾರಿ ಇಲಾಖೆಗಳ ನೌಕರರಂತೆ ಕೆ.ಜಿ.ಐ.ಡಿ ಮತ್ತು ಜಿ.ಪಿ.ಎಫ್ ಸೌಲಭ್ಯವನ್ನು ವಿಸ್ತರಿಸಲು ನಿಯಮಗಳಲ್ಲಿ ಅವಕಾಶವಿಲ್ಲದೇ ಇರುವುದರಿಂದ ಪ್ರಸ್ತಾವನೆಯನ್ನು ತಿರಸ್ಕರಿಸಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಎಸ್.ವೀಣಾ)
ಸರ್ಕಾರದಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ
(ಮಹಾನಗರ ಪಾಲಿಕೆ-2.)

## ಕರ್ನಾಟಕ ಸರ್ಕಾರದ ನಡವಳಿಗಳು

ಖಜಾನೆ ಆಯುಕ್ತರ ಕಾರ್ಯಾಲಯ ಬೆಂಗಳೂರು
ಕ್ರ.ಸಂ. 1297
16 MAR 2023

ವಿಷಯ: ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನೂತನ 'ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ'ಯನ್ನು (THE KARNATAKA AROGYA SANJEEVINI SCHEME –KASS) ಜಾರಿಗೊಳಿಸುವ ಕಾರ್ಯನೀತಿ (POLICY FRAMEWORK) ಬಗ್ಗೆ ಪರಿಷ್ಕೃತ ಸೂಚನೆಗಳನ್ನು ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್ಎಂಆರ್ 2020, ದಿನಾಂಕ: 05.09.2022.
2. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, (SAST) ಬೆಂಗಳೂರು ಇವರ ಪತ್ರ ಸಂಖ್ಯೆ: ಹೆಚ್ಎಫ್‌ಡಬ್ಲ್ಯೂ/ಎಸ್ಎಎಸ್‌ಟಿ/ಎಂಎಂ-23/2021-22. ದಿನಾಂಕ: 27.01.2022.
3. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, (SAST) ಬೆಂಗಳೂರು ಇವರ ಪತ್ರ ಸಂಖ್ಯೆ:ಹೆಚ್ಎಫ್‌ಡಬ್ಲ್ಯೂ/ಎಸ್ಎಎಸ್‌ಟಿ/ಕೆಎಎಸ್ಎಸ್/-28/2022-223, ದಿನಾಂಕ: 15.02.2023.
4. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, (SAST) ಬೆಂಗಳೂರು ಇವರ ಪತ್ರ ಸಂಖ್ಯೆ:ಹೆಚ್ಎಫ್‌ಡಬ್ಲ್ಯೂ/ಎಸ್ಎಎಸ್‌ಟಿ/ಕೆಎಎಸ್ಎಸ್/-29/2022-223, ದಿನಾಂಕ: 13.02.2023.
5. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, (SAST) ಬೆಂಗಳೂರು ಇವರ ಪತ್ರ ಸಂಖ್ಯೆ:ಹೆಚ್ಎಫ್‌ಡಬ್ಲ್ಯೂ/ಎಸ್ಎಎಸ್‌ಟಿ/ಕೆಎಎಸ್ಎಸ್/-2022-223, ದಿನಾಂಕ: 25.01.2023.
6. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, (SAST) ಬೆಂಗಳೂರು ಇವರ ಪತ್ರ ಸಂಖ್ಯೆ:ಹೆಚ್ಎಫ್‌ಡಬ್ಲ್ಯೂ/ಎಸ್ಎಎಸ್‌ಟಿ/ಕೆಎಎಸ್ಎಸ್/-2022-223, ದಿನಾಂಕ: 13.02.2023

***

<u>ಪ್ರಸ್ತಾವನೆ:</u>

ರಾಜ್ಯ ಸರ್ಕಾರವು 2020-21ನೇ ಹಾಗೂ 2021-22ನೇ ಸಾಲಿನ ಆಯವ್ಯಯದಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಸದಸ್ಯರಿಗೆ ಶಸ್ತ್ರಚಿಕಿತ್ಸಾ ವಿಧಾನಗಳಿಗೆ ನಗದು ರಹಿತ ಚಿಕಿತ್ಸೆ ಒದಗಿಸುವ ಒಂದು ನೂತನ ಯೋಜನೆಯನ್ನು ಘೋಷಿಸಿದ್ದು, ಅದರಂತೆ ಯೋಜನೆಯ ರೂಪುರೇಷೆಗಳೊಂದಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಆರ್ಥಿಕ ಇಲಾಖೆಗಳೊಂದಿಗೆ ಸಮಾಲೋಚಿಸಿ, **'ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ'** (KARNATAKA AROGYA SANJEEVINI SCHEME – KASS) ಎಂಬ ಮಹತ್ವಾಕಾಂಕ್ಷಿ ನೂತನ ಯೋಜನೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡುವ

ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮುಖಾಂತರ (SAST) ಅನುಷ್ಠಾನಗೊಳಿಸಲು ಸರ್ಕಾರವು ನಿರ್ಧರಿಸಿ, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020 ದಿನಾಂಕ: 05.09.2022ರಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸುವ ಕುರಿತಂತೆ ಕೆಲವು ಆರಂಭಿಕ ಕಾರ್ಯನೀತಿ (POLICY FRAME WORK) ಬಗ್ಗೆ ಸೂಚನೆಗಳನ್ನು ನೀಡಲಾಗಿದೆ. ಈ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಯೋಜನೆಯಲ್ಲಿ ಒಳಗೊಂಡ ವೈದ್ಯಕೀಯ ಚಿಕಿತ್ಸಾ ವಿಧಾನಗಳು ಹಾಗೂ ದರಗಳು, ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಸದಸ್ಯರು ಯೋಜನೆಗೆ ಒಳಪಡಲು ಅರ್ಹತೆ ಹಾಗೂ ಅರ್ಜಿ ನಮೂನೆಗಳು, ಡಿಡಿಓ (DDO) ಗಳಿಗೆ ನೋಂದಾವಣೆ ಸಂಬಂಧ ಸೂಚನೆಗಳು, HRMS ಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರಿಗಳಿಗೆ ಸೂಚನೆಗಳು, ಖಾಸಗಿ ಆಸ್ಪತ್ರೆಗಳೊಂದಿಗೆ ಒಡಂಬಡಿಕೆ, ಹಾಗೂ ಇತರೆ ಅವಶ್ಯವಿರುವ ಕೆಲವು ನಿರ್ದೇಶನಗಳನ್ನು ಹೊರಡಿಸಬೇಕಾಗಿದೆ. ಈ ಸಂಬಂಧ ಮೇಲೆ ಓದಲಾದ 2 ರಿಂದ 6 ರಲ್ಲಿ ಕಾರ್ಯಕಾರಿ ನಿರ್ದೇಶಕರು, SAST ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020(ಭಾ-5)**
**ದಿನಾಂಕ:09.03.2023**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಸದಸ್ಯರಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸಾ ಸೌಲಭ್ಯ ಒದಗಿಸಲು ನೂತನ 'ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ' (KASS) ಯನ್ನು ಅನುಷ್ಠಾನಗೊಳಿಸುವ ಸಂಬಂಧ ಸರ್ಕಾರವು ಈ ಕೆಳಕಂಡ ಸೂಚನೆಗಳನ್ನು ನೀಡಿ ಆದೇಶಿಸಿದೆ:

1. KASS ಯೋಜನೆಯ ಉದ್ದೇಶಕ್ಕಾಗಿ "ಕುಟುಂಬ" ಪದವನ್ನು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963 ರ ನಿಯಮ 2ರಲ್ಲಿನ "**ಕುಟುಂಬ" (Family)** ಅಂದರೆ:

   i. ಸರ್ಕಾರಿ ನೌಕರನ ಪತಿ ಅಥವಾ ಪತ್ನಿ

   ii. ತಂದೆ ಮತ್ತು ತಾಯಿ (ಮಲ ತಾಯಿಯನ್ನೊಳಗೊಂಡಂತೆ) -ಅವರು ಸರ್ಕಾರಿ ನೌಕರನೊಂದಿಗೆ ಸಾಮಾನ್ಯವಾಗಿ ವಾಸವಾಗಿದ್ದಲ್ಲಿ ಮತ್ತು ಅವರ ಒಟ್ಟು ಮಾಸಿಕ ಆದಾಯ- ಕನಿಷ್ಠ ಕುಟುಂಬ ಪಿಂಚಣಿ (ರೂ.8500/-) ಹಾಗೂ ಚಾಲ್ತಿಯಲ್ಲಿದ್ದ ತುಟ್ಟಿಭತ್ಯೆಯನ್ನು ಒಳಗೊಂಡ ಮೊತ್ತವನ್ನು ಮೀರದಿದ್ದಲ್ಲಿ;

   iii. ಸರ್ಕಾರಿ ನೌಕರನ ಮೇಲೆ ಸಂಪೂರ್ಣವಾಗಿ ಅವಲಂಬಿತರಾಗಿರುವ ಮಕ್ಕಳು (ದತ್ತು ಪಡೆದ ಮಕ್ಕಳು ಮತ್ತು ಮಲಮಕ್ಕಳನ್ನೊಳಗೊಂಡಂತೆ)

   ಮೇಲೆ ವ್ಯಾಖ್ಯಾನಿಸಿದಂತೆ ಕುಟುಂಬದ ಸದಸ್ಯರನ್ನು ಯೋಜನೆಯಡಿ ನೋಂದಾಯಿಸಿಕೊಳ್ಳತಕ್ಕದ್ದು.

2. ಯೋಜನೆಗೆ ಒಳಪಡಲು ಅರ್ಹರಿರುವ ನೌಕರ ವರ್ಗ:

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963 ರಡಿ ವೈದ್ಯಕೀಯ ಹಾಜರಾತಿಗೆ ಅರ್ಹರಿರುವ ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರು.

ಈ ಯೋಜನೆಗೆ ಒಳಪಡದ ನೌಕರ ವರ್ಗ:

- ರಾಜ್ಯ ಉಚ್ಚ ನ್ಯಾಯಾಲಯದ ನೌಕರರು.
- ರಾಜ್ಯ ವಿಧಾನ ಮಂಡಲದ ನೌಕರರು
- 'ಆರೋಗ್ಯ ಭಾಗ್ಯ' ಯೋಜನೆಯ ಸೌಲಭ್ಯ ಪಡೆಯುತ್ತಿರುವ ಪೊಲೀಸ್ ಇಲಾಖೆಯ ಸಿಬ್ಬಂದಿ.
- ಕರ್ನಾಟಕ ನ್ಯಾಯಾಂಗ ಅಧಿಕಾರಿಗಳ ವೈದ್ಯಕೀಯ ಹಾಜರಾತಿ ನಿಯಮಗಳು, 2009 ರಡಿ ವೈದ್ಯಕೀಯ ಸೌಲಭ್ಯ ಪಡೆಯುತ್ತಿರುವ ನ್ಯಾಯಾಂಗ ಅಧಿಕಾರಿಗಳು.
- ಅಖಿಲ ಭಾರತ ಸೇವೆಗೆ ಸೇರಿದ್ದ ಅಧಿಕಾರಿಗಳು.
- ಸಾರ್ವಜನಿಕ ಸ್ಥಾಪನೆಗಳು ಅಂದರೆ ಸ್ಥಳೀಯ ಸಂಸ್ಥೆಗಳು, ವಿಶ್ವವಿದ್ಯಾಲಯಗಳು, ನಿಗಮ/ ಮಂಡಳಿಗಳು, ಸಹಕಾರ ಸಂಸ್ಥೆಗಳ ನೌಕರರು, ಅನುದಾನಿತ ಶಿಕ್ಷಣ ಸಂಸ್ಥೆಗಳು, ಇತರೆ ಸಂಸ್ಥೆಗಳು.

3. ಯೋಜನೆಗೆ ನೋಂದಾಯಿಸಿಕೊಳ್ಳುವುದು(Enrolment):

(i) ಸರ್ಕಾರಿ ನೌಕರರು KASS ಯೋಜನೆಯಲ್ಲಿ ನೋಂದಾಯಿಸಿಕೊಳ್ಳುವ ಸಂಬಂಧ ಅರ್ಜಿ ನಮೂನೆ ಹಾಗೂ ಸರ್ಕಾರಿ ನೌಕರರಿಗೆ, ಕಚೇರಿ ಮುಖ್ಯಸ್ಥರು ಹಾಗೂ ಡಿಡಿಓ ಗಳಿಗೆ ಇನ್ನಿತರೆ ಕೆಲವು ಸೂಚನೆಗಳನ್ನು ಮತ್ತು ಘೋಷಣಾ ಪತ್ರಗಳ ನಮೂನೆಗಳನ್ನು **ಅನುಬಂಧ (1)** ರಲ್ಲಿ ನೀಡಲಾಗಿದೆ.

(ii) ಯೋಜನೆಯ ಫಲಾನುಭವಿಗಳನ್ನು ಗುರುತಿಸಲು ಹಾಗೂ ನೋಂದಾಯಿಸಲು ಮತ್ತು ಯಾವುದೇ ಬದಲಾವಣೆಗಳನ್ನು ಕೈಗೊಳ್ಳಲು ಪ್ರಸ್ತುತ HRMS ವ್ಯವಸ್ಥೆಯಲ್ಲಿ ಲಭ್ಯವಿರುವ ದತ್ತಾಂಶವನ್ನು ಅಳವಡಿಸಿಕೊಳ್ಳಲು ಹಾಗೂ ಈ ಸಂಬಂಧ ಅಗತ್ಯ ಮಾರ್ಪಾಡುಗಳನ್ನು ಕೈಗೊಳ್ಳಲು ಮತ್ತು ಈ ದತ್ತಾಂಶವನ್ನು ಬಳಸಲು (Access) ಎಲ್ಲಾ ಡಿಡಿಓಗಳಿಗೆ ತಾತ್ಕಾಲಿಕವಾಗಿ ಅನುಮತಿಸಲಾಗಿದೆ. ಅನುಬಂಧ (1) ರಲ್ಲಿ ನೀಡಲಾದ ಸೂಚನೆಗಳನ್ನು ಮತ್ತು ನಿಗದಿಪಡಿಸಲಾದ ನಮೂನೆಗಳು ಮತ್ತು ಘೋಷಣಾ ಪತ್ರಗಳನ್ನು ಆಧರಿಸಿ ಡಿಡಿಓ ಗಳು HRMS ನಲ್ಲಿ ಅಗತ್ಯ ನಮೂದುಗಳನ್ನು ಕೈಗೊಳ್ಳತಕ್ಕದ್ದು. ಈ ಸಂಬಂಧ HRMS ಸಂಸ್ಥೆಗೆ ಪ್ರತ್ಯೇಕ ಸೂಚನೆಗಳನ್ನು ನೀಡಲಾಗುವುದು.

(iii) HRMS ಸಂಸ್ಥೆಯು ಯೋಜನೆಯ ನೋಂದಾವಣೆಗೆ ಸಂಬಂಧಿಸಿದಂತೆ ಕಾಲ ಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗಳು ಮತ್ತು ನಿರ್ದೇಶನಗಳನ್ನು ಎಲ್ಲಾ ಸರ್ಕಾರಿ ನೌಕರರು ಹಾಗೂ ಡಿಡಿಓ ಗಳು ಕಟ್ಟುನಿಟ್ಟಾಗಿ ಅನುಸರಿಸತಕ್ಕದ್ದು.

...4/-

4. **ಖಾಸಗಿ ಆಸ್ಪತ್ರೆಗಳೊಂದಿಗೆ ಭಾವಿತ ನೋಂದಾವಣೆ: (Deemed Empanelment of Private Hospitals):** ಯೋಜನೆಗೆ ಕ್ಷಿಪ್ರಗತಿಯಲ್ಲಿ ಚಾಲನೆ ನೀಡುವ ಉದ್ದೇಶದಿಂದ, ಈಗಾಗಲೇ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನಡಿಯಲ್ಲಿ ವಿವಿಧ ಯೋಜನೆಗಳಡಿಯಲ್ಲಿ ಮತ್ತು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ರಡಿ ನೋಂದಾಯಿತವಾಗಿರುವ (ಜ್ಯೋತಿ ಸಂಜೀವಿನಿ ಯೋಜನೆ ಸೇರಿದಂತೆ) ಖಾಸಗಿ ಆಸ್ಪತ್ರೆಗಳನ್ನು KASS ಯೋಜನೆಯಡಿ **ಭಾವಿತ ನೋಂದಾವಣೆಗೆ (Deemed Empanelment)** ಒಳಪಡಿಸಲು **ಅನುಮತಿಸಲಾಗಿದೆ.** ಆದರೆ ಅಂತಹ ಆಸ್ಪತ್ರೆಗಳು ಯೋಜನೆಯಡಿ ನಿಗದಿಪಡಿಸಿರುವ ಒಡಂಬಡಿಕೆಗೆ (MoU) ಒಪ್ಪಿಗೆಯನ್ನು ಸೂಚಿಸತಕ್ಕದ್ದು ಮತ್ತು ಆರು ತಿಂಗಳಲ್ಲಿ ಯೋಜನೆಗೆ ನಿಗದಿಪಡಿಸಿರುವ ಪೂರ್ಣ ಪ್ರಮಾಣದ ಮಾನದಂಡಗಳನ್ನು ಪೂರೈಸತಕ್ಕದ್ದು. ವಿವಿಧ ತಜ್ಞತೆಗಳ ಆಸ್ಪತ್ರೆಗಳು ಹೊಂದಿರಬೇಕಾದ (ಉದಾ: ತಜ್ಞತೆಗನುಸಾರ ಆಸ್ಪತ್ರೆ ಹಾಸಿಗೆಗಳ ಸಂಖ್ಯೆ, ವಿಸ್ತೀರ್ಣ, ತಜ್ಞ ವೈದ್ಯರು ಮತ್ತು ಅರೆ ವೈದ್ಯಕೀಯ ಸಿಬ್ಬಂದಿ, ಯಂತ್ರೋಪಕರಣಗಳು, ಪ್ರಮಾಣ ಪತ್ರಗಳು ಇತ್ಯಾದಿ) ಮಾನದಂಡಗಳನ್ನು ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಇವರು ರಚಿಸಿ ಪ್ರಕಟಿಸಲು ಕ್ರಮವಹಿಸತಕ್ಕದ್ದು.

5. **KASS ಯೋಜನೆಯಲ್ಲಿ ಒಳಗೊಂಡಿರುವ ವೈದ್ಯಕೀಯ ಚಿಕಿತ್ಸಾ ವಿಧಾನಗಳು ಹಾಗೂ ಚಿಕಿತ್ಸಾ ದರಗಳು: (Medical Procedures and Rates):** KASS ಯೋಜನೆಯಲ್ಲಿ ಒಳಗೊಂಡಿರುವ ವೈದ್ಯಕೀಯ ಚಿಕಿತ್ಸಾ ವಿಧಾನಗಳು ಹಾಗೂ ಚಿಕಿತ್ಸಾ ದರಗಳ ಪಟ್ಟಿಯನ್ನು **ಅನುಬಂಧ-(2)** ರಲ್ಲಿ ಇಡಲಾಗಿದೆ.

6. **ವಾರ್ಡ್ ದರಗಳು:** ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ರ ನಿಯಮ 3(h) ಮತ್ತು 8ರಲ್ಲಿ ನಿಗದಿಪಡಿಸಿರುವ ವಾರ್ಡ್ ದರಗಳು (ಅಧಿಸೂಚನೆ ಸಂಖ್ಯೆ:DPAR 25 SMR 2012, ದಿನಾಂಕ:03.07.2014).
ಟಿಪ್ಪಣಿ: ರಾಜ್ಯದ 6ನೇ ವೇತನ ಆಯೋಗದ ಸಂವಾದಿಯಾಗಿ ದರಗಳು ಅನ್ವಯವಾಗತಕ್ಕದ್ದು.

**ಮೇಲೆ ನೀಡಿರುವ ಸೂಚನೆಗಳಂತೆ KASS ಯೋಜನೆಯನ್ನು ಕಾರ್ಯಾರಂಭಗೊಳಿಸಲು ಕಾರ್ಯಕಾರಿ ನಿರ್ದೇಶಕರು, SAST ಬೆಂಗಳೂರು ಇವರು ಅಗತ್ಯ ಜರೂರು ಕ್ರಮಗಳನ್ನು ಕೈಗೊಳ್ಳುವಂತೆ ಆದೇಶಿಸಲಾಗಿದೆ.**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ನಾಗರತ್ನ ವಿ.ಪಾಟೀಲ್) 9/3/2023
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾನಿಯಮಗಳು-2)

**ಸಂಕಲನಕಾರರು, ಇ-ರಾಜ್ಯಪತ್ರ, ಬೆಂಗಳೂರು.**

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು(ಜಿ&ಎಸ್ಎಸ್ಎ)/(ಇ&ಆರ್ಎಸ್-ಎ)/(ಎ&ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

3. ಅಭಿವೃದ್ಧಿ ಆಯುಕ್ತರು ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
9. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು..
10. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
11. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
12. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು, ರಾಜ ಭವನ, ಬೆಂಗಳೂರು.
13. ಯೋಜನಾ ನಿರ್ದೇಶಕರು, HRMS, 5ನೇ ಮಹಡಿ, New KPCL ಕಟ್ಟಡ, ಅರಮನೆ ರಸ್ತೆ, ಬೆಂಗಳೂರು-560001.
14. ಯೋಜನಾ ನಿರ್ದೇಶಕರು, ಖಜಾನೆ-2, ಖಜಾನೆ ಆಯುಕ್ತರ ಕಛೇರಿ, 6ನೇ ಮಹಡಿ, ಕೆ.ಪಿ.ಟಿ.ಸಿ.ಎಲ್. ಅರಮನೆ ರಸ್ತೆ, ಬೆಂಗಳೂರು.
15. ಎಲ್ಲಾ ಇಲಾಖಾ ಮುಖ್ಯಸ್ಥರು.
16. ಎಲ್ಲಾ ಪ್ರಾದೇಶಿಕ ಆಯುಕ್ತರು.
17. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
18. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
19. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
20. ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು.
21. ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
22. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
23. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
24. ನಿವಾಸಿ ಆಯುಕ್ತರು, ಕರ್ನಾಟಕ ಭವನ, ನಂ.10, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ- 110011.
25. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ (ವಿಷಯ ಸಂಖ್ಯೆ: ಸಿ: 298/2021).
26. ರಾಜ್ಯಾಧ್ಯಕ್ಷರು, ಕರ್ನಾಟಕ ಸರ್ಕಾರಿ ನೌಕರರ ಸಂಘ, ಕಬ್ಬನ್ ಪಾರ್ಕ್, ಬೆಂಗಳೂರು.
27. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-12) ವಿಧಾನಸೌಧ.
28. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಲೆಕ್ಕಪತ್ರ).
29. ಶಾಖಾ ರಕ್ಷಾ ಕಡತ/ ಬಿಡಿ ಪ್ರತಿಗಳು.

ಈ ಆದೇಶವನ್ನು ಸರ್ಕಾರದ ಅಧಿಕೃತ ಜಾಲತಾಣ https://dpar.karnataka.gov.in ರಲ್ಲಿ ವೀಕ್ಷಿಸಬಹುದು.

*****